# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 127 |
| ವಿಧಾನ ಪರಿಷತ್ತಿನ ಸದಸ್ಯರ ಹೆಸರು | : | ಶ್ರೀ ಎಂ.ನಾಗರಾಜು (ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವವರು | : | ಮಾನ್ಯ ಸಣ್ಣ ಕೈಗಾರಿಕೆ ಮತ್ತು ಸಾರ್ವಜನಿಕ ಉದ್ದಿಮೆ ಸಚಿವರು |
| ಉತ್ತರಿಸಬೇಕಾದ ದಿನಾಂಕ | : | 05.12.2023 |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಸಣ್ಣ ಕೈಗಾರಿಕೋದ್ಯಮಿಗಳು ಅನುಭವಿಸುತ್ತಿರುವ ಸಮಸ್ಯೆಗಳು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಈ ಸಮಸ್ಯೆಗಳನ್ನು ಪರಿಹರಿಸುವಲ್ಲಿ ಸರ್ಕಾರ ಕೈಗೊಂಡ ಕ್ರಮಗಳೇನು; | ರಾಜ್ಯದಲ್ಲಿ ಸಣ್ಣ ಕೈಗಾರಿಕೋದ್ಯಮಿಗಳು ಅನುಭವಿಸುತ್ತಿರುವ ಸಮಸ್ಯೆಗಳು ಸರ್ಕಾರದ ಗಮನಕ್ಕೆ ಬಂದಿರುತ್ತವೆ.<br><br>ರಾಜ್ಯದಲ್ಲಿ ಸಣ್ಣ ಕೈಗಾರಿಕೋದ್ಯಮಿಗಳು ಅನುಭವಿಸುತ್ತಿರುವ ಸಮಸ್ಯೆಗಳನ್ನು ಬಗೆಹರಿಸಲು ಸರ್ಕಾರವು ಬೆಂಗಳೂರು, ಕಲಬುರಗಿ, ಬೆಳಗಾವಿ, ಮಂಗಳೂರು, ಮೈಸೂರು ಮತ್ತು ತುಮಕೂರುಗಳಲ್ಲಿ ವಿಭಾಗವಾರು ಕೈಗಾರಿಕಾ ಅದಾಲತ್ ನಡೆಸಿ ಕೈಗಾರಿಕೋದ್ಯಮಿಗಳ ಸಮಸ್ಯೆಗಳಿಗೆ ಪರಿಹಾರ ಒದಗಿಸಿದೆ.<br><br>ಅಲ್ಲದೇ ಸಂಬಂಧಿಸಿದ ಜಿಲ್ಲೆಯ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ "ಕೈಗಾರಿಕಾ ಸ್ಪಂದನ" ಕಾರ್ಯಕ್ರಮಡಿಯಲ್ಲಿ ಜಿಲ್ಲೆಯ ಸಣ್ಣ ಕೈಗಾರಿಕೆಗಳ ಸಮಸ್ಯೆಗಳನ್ನು ಚರ್ಚಿಸಿ ಪರಿಹಾರ ಒದಗಿಸಲಾಗುತ್ತಿದೆ. |
| ಆ) | ಕೋವಿಡ್-19 ರ ಸಂದರ್ಭದಲ್ಲಿ ಅನೇಕ ಸಣ್ಣ ಕೈಗಾರಿಕೆಗಳು ಕಾರ್ಯಾಚರಣೆಯನ್ನು ಮುಂದುವರೆಸದೆ ಸ್ಥಗಿತಗೊಳಿಸಿ ಅಪಾರ ನಷ್ಟವನ್ನು ಅನುಭವಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಸಣ್ಣ ಕೈಗಾರಿಕೆಗಳ ಪುನಃಚೇತನಕ್ಕೆ ಸರ್ಕಾರವು ಕೈಗೊಂಡಿರುವ ಕ್ರಮಗಳೇನು? | ಕೋವಿಡ್-19 ರ ಸಂದರ್ಭದಲ್ಲಿ ಅನೇಕ ಸಣ್ಣ ಕೈಗಾರಿಕೆಗಳು ಕಾರ್ಯಾಚರಣೆಯನ್ನು ಮುಂದುವರೆಸದೇ ಸ್ಥಗಿತಗೊಳಿಸಿ ಅಪಾರ ನಷ್ಟವನ್ನು ಅನುಭವಿಸಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ.<br><br>ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಇವುಗಳನ್ನು ಪುನಃಶ್ಚೇತನಗೊಳಿಸಲು ಹಮ್ಮಿಕೊಂಡಿರುವ ಯೋಜನೆಗಳು ಈ ಕೆಳಗಿನಂತಿವೆ:<br><br>**ಕೇಂದ್ರ ಸರ್ಕಾರದ ಯೋಜನೆ:**<br><br>ಕೇಂದ್ರ ಸರ್ಕಾರ ಘೋಷಿಸಿರುವ "ಆತ್ಮ ನಿರ್ಭರ ಭಾರತ ಅಭಿಯಾನ" ದ ಅಡಿಯಲ್ಲಿ ಅತೀ ಸಣ್ಣ, ಸಣ್ಣ ಮತ್ತು ಮಧ್ಯಮ ಕೈಗಾರಿಕೆಗಳನ್ನು ಪುನಃಶ್ಚೇತನಗೊಳಿಸಲು ಮತ್ತು ಉದ್ಯಮಗಳಿಗೆ ಆರ್ಥಿಕ ನೆರವು ನೀಡುವ ಯೋಜನೆಯಲ್ಲಿ ಈ ಕೆಳಗಿನ ನೆರವು ದೊರೆತಿದೆ:<br><br>ಭಾರತ ಸರ್ಕಾರವು "ಇ.ಸಿ.ಎಲ್.ಜಿ-ಎಮರ್ಜೆನ್ಸಿ ಕ್ರೆಡಿಟ್ ಲೈನ್ ಗ್ಯಾರಂಟಿ ಯೋಜನೆ" ಯನ್ನು ಜಾರಿಗೆ ತಂದಿದ್ದು, ಇದರನ್ವಯ ಫೆಬ್ರುವರಿ 2020 ರ ಅಂತ್ಯಕ್ಕೆ ಬ್ಯಾಂಕ್‌ಗಳಲ್ಲಿ ಬಾಕಿ ಇರುವ ಎಂ.ಎಸ್.ಎಂ.ಇ ಘಟಕಗಳ ಸಾಲದ ಮೊತ್ತಕ್ಕೆ ಶೇ.20% ರಷ್ಟು ಹೆಚ್ಚುವರಿ ಸಾಲವನ್ನು ಯಾವುದೇ ಹೆಚ್ಚುವರಿ ಖಾತರಿ ಇಲ್ಲದೇ ನೀಡುವ ಯೋಜನೆಯನ್ನು ಜಾರಿಗೆ ತಂದಿರುತ್ತದೆ. ಇದರಡಿಯಲ್ಲಿ ಇದುವರೆಗೆ ಬ್ಯಾಂಕ್‌ಗಳು ನೀಡಿರುವ ಸಾಲದ ವಿವರಗಳು ಈ ಕೆಳಗಿನಂತಿವೆ: |

| # | ಒಟ್ಟು ಘಟಕಗಳು | ಒಟ್ಟು ಸಾಲದ ಮೊತ್ತ ರೂ.ಲಕ್ಷಗಳಲ್ಲಿ |
|---|---|---|
| ಸಾಲ ಮಂಜೂರಾತಿ | 1,69,280 | 5,73,805.15 |
| ಸಾಲ ಬಿಡುಗಡೆ | 1,48,662 | 4,90,049.41 |

**ರಾಜ್ಯ ಸರ್ಕಾರದ ಯೋಜನೆ:**

ಕೋವಿಡ್ ನಿಂದ ಅತಂತ್ರವಾಗಿರುವ ಸಣ್ಣ ಕೈಗಾರಿಕೆಗಳಿಗೆ ರಾಜ್ಯ ಸರ್ಕಾರದಿಂದ ಈ ಕೆಳಗಿನ ಯೋಜನೆಗಳನ್ನು ರೂಪಿಸಲಾಗಿರುತ್ತದೆ:

1. ಇಂಧನ ಇಲಾಖೆಯು ಸೂಕ್ಷ್ಮ, ಸಣ್ಣ ಮತ್ತು ಮಧ್ಯಮ ಕೈಗಾರಿಕೆಗಳ ಎಪ್ರಿಲ್ ಮತ್ತು ಮೇ 2020 ತಿಂಗಳುಗಳ ಬೇಡಿಕೆ ಶುಲ್ಕ ಮತ್ತು ಸ್ಥಿರ ಶುಲ್ಕವನ್ನು ಮನ್ನಾ ಮಾಡಿರುತ್ತದೆ.

2. ಇಂಧನ ಇಲಾಖೆಯು ವಿದ್ಯುತ್ ಬಿಲ್ ಅನ್ನು ಪ್ರಾಮಾಣಿಕವಾಗಿ ನಿಗದಿತ ಅವಧಿಯೊಳಗೆ ಪಾವತಿಸುವ ಕೈಗಾರಿಕೆಗಳಿಗೆ ರಿಯಾಯಿತಿಯನ್ನು ನೀಡಿರುತ್ತದೆ. ಹೆಚ್.ಟಿ ಗರಿಷ್ಟ ಮಿತಿ ರೂ.1.00 ಲಕ್ಷ, ಎಲ್.ಟಿ ಗರಿಷ್ಟ ಮಿತಿ 2,10,000/-

| | |
|---|---|
| 1 ರಿಂದ 5 ದಿನದೊಳಗೆ ಪಾವತಿಸಿದಲ್ಲಿ | ಶೇ 1% ರಿಯಾಯತಿ |
| 6 ರಿಂದ 15 ದಿನದೊಳಗೆ ಪಾವತಿಸಿದಲ್ಲಿ | ಶೇ 0.5% ರಿಯಾಯತಿ |
| 15 ರಿಂದ 30 ದಿನದೊಳಗೆ ಪಾವತಿಸಿದಲ್ಲಿ | ಯಾವುದೇ ರಿಯಾಯಿತಿ ಇರುವುದಿಲ್ಲ. |

3. ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿಯು (KIADB) ಉದ್ಯಮಶೀಲರು ತಮಗೆ ಹಂಚಿಕೆಯಾದ ನಿವೇಶನಗಳ ಕಂತು ಮಾರ್ಚ್, ಎಪ್ರಿಲ್ ಮತ್ತು ಮೇ 2020 ತಿಂಗಳಲ್ಲಿ ಪಾವತಿಸಿದ್ದಲ್ಲಿ ಆ ಪಾವತಿಯನ್ನು ಕ್ರಮವಾಗಿ 3 ತಿಂಗಳು ಮುಂದೂಡಲಾಗಿದೆ ಮತ್ತು ಈ ಮೊತ್ತಕ್ಕೆ ಯಾವುದೇ ಬಡ್ಡಿಯನ್ನು ಸಹ ವಿಧಿಸುವುದಿಲ್ಲ.

4. ಕರ್ನಾಟಕ ರಾಜ್ಯ ಸಣ್ಣ ಕೈಗಾರಿಕೆಗಳ ಅಭಿವೃದ್ಧಿ ನಿಗಮವು (KSSIDC) ಉದ್ಯಮಶೀಲರು ತಮಗೆ ಹಂಚಿಕೆಯಾದ ನಿವೇಶನಗಳ ಕಂತು, ಮಳಿಗೆಗಳ ಬಾಡಿಗೆ ಮತ್ತು ನೀರಿನ ಶುಲ್ಕಗಳ ಎಪ್ರಿಲ್ ಮತ್ತು ಮೇ 2020 ತಿಂಗಳುಗಳ ಕಂತನ್ನು ಈ ಕೆಳಗಿನಂತೆ ಪಾವತಿಸಲು ಅವಕಾಶ ಕಲ್ಪಿಸಲಾಗಿದ್ದು, ಇದಕ್ಕೆ ಯಾವುದೇ ಬಡ್ಡಿಯನ್ನು ವಿಧಿಸಲಾಗುವುದಿಲ್ಲ:.

| | |
|---|---|
| ಎಪ್ರಿಲ್ 2020 ತಿಂಗಳ ಕಂತು | ಜೂನ್ 2020 ತಿಂಗಳ ಕಂತಿನೊಂದಿಗೆ ಪಾವತಿಸತಕ್ಕದ್ದು |
| ಮೇ 2020 ತಿಂಗಳ ಕಂತು | ಜುಲೈ 2020 ತಿಂಗಳ ಕಂತಿನೊಂದಿಗೆ ಪಾವತಿಸತಕ್ಕದ್ದು |
| ಜೂನ್ 2020 ತಿಂಗಳ ಕಂತು | ಅಗಸ್ಟ 2020 ತಿಂಗಳ ಕಂತಿನೊಂದಿಗೆ ಪಾವತಿಸತಕ್ಕದ್ದು |

| | | |
|---|---|---|
| | | ಕೋವಿಡ್- 2 ನೇ ಅಲೆಯ ನಂತರ ರಾಜ್ಯ ಸರ್ಕಾರದ ಇಂಧನ ಇಲಾಖೆಯು ದಿನಾಂಕ 21.06.2021 ರ ಆದೇಶದಂತೆ ಸೂಕ್ಷ್ಮ, ಸಣ್ಣ ಮತ್ತು ಮಧ್ಯಮ ಕೈಗಾರಿಕೆಗಳು ಪಾವತಿಸಬೇಕಾದ ಮೇ ಮತ್ತು ಜೂನ್ 2021 ತಿಂಗಳ ಬೇಡಿಕೆ/ ನಿಗದಿತ ಶುಲ್ಕವನ್ನು ಮನ್ನಾ ಮಾಡಿರುತ್ತದೆ. |

ಸಿಐ 136 ಎಸ್ಎಸ್ಐ 2023

(ಶರಣಬಸಪ್ಪ ದರ್ಶನಾಪೂರ)
ಸಣ್ಣ ಕೈಗಾರಿಕೆ ಮತ್ತು
ಸಾರ್ವಜನಿಕ ಉದ್ದಿಮೆ ಸಚಿವರು